**All India Radio: Bangalore**
**National Bulletin In Kannada**
**20.04.2026  1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**20.04.2026  1.10 pm**

**<>><><*><><<>**

ಮುಖ್ಯಾಂಶಗಳು

೧. ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ, ದಕ್ಷಿಣ ಕೋರಿಯಾ ಅಧ್ಯಕ್ಷರ ನಡುವೆ ದ್ವಿಪಕ್ಷೀಯ ಮಾತುಕತೆ ; ಸಹಕಾರ ಬಲವರ್ಧನೆಗೆ ಒತ್ತು

೨. ಶ್ರೀಲಂಕಾದಲ್ಲಿ ಭಾರತೀಯ ವಸತಿ ಯೋಜನೆ ಹಂತ ೩ರಡಿ ನಿರ್ಮಿತ ಮನೆಗಳನ್ನು ವೀಕ್ಷಿಸಿದ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್

೩. ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಸೌದಿ ಅರೇಬಿಯಾ ಭೇಟಿ ; ಉನ್ನತ ನಾಯಕರೊಂದಿಗೆ ಮಹತ್ವದ ಚರ್ಚೆ

೪. ಜಮ್ಮು-ಕಾಶ್ಮೀರದ ಉಧಂಪುರದಲ್ಲಿ ಬಸ್ ಅಪಘಾತ ; ೧೫ ಮಂದಿ ಸಾವು, ಹಲವರಿಗೆ ಗಾಯ

೫. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ಗುಜರಾತ್ ಟೈಟಾನ್ಸ್-ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿ

**<>><><*><><<>**

ಭಾರತ ಮತ್ತು ದಕ್ಷಿಣ ಕೊರಿಯಾ ನಡುವಿನ ದ್ವಿಪಕ್ಷೀಯ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಂದು ನವದೆಹಲಿಯಲ್ಲಿ ದಕ್ಷಿಣ ಕೊರಿಯಾದ ಅಧ್ಯಕ್ಷ ಲೀ ಜೇ ಮ್ಯುಂಗ್ ಅವರೊಂದಿಗೆ ಮಹತ್ವದ ಮಾತುಕತೆ ನಡೆಸಿದರು. ಉಭಯ ನಾಯಕರ ಈ ಭೇಟಿಯು ಹಡಗು ನಿರ್ಮಾಣ, ವ್ಯಾಪಾರ, ಹೂಡಿಕೆ, ಕೃತಕ ಬುದ್ಧಿಮತ್ತೆ, ಸೆಮಿಕಂಡಕ್ಟರ್‌ಗಳು ಹಾಗೂ ಉದಯೋನ್ಮುಖ ತಂತ್ರಜ್ಞಾನಗಳೂ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರವನ್ನು ವಿಸ್ತರಿಸುವ ಗುರಿಯನ್ನು ಹೊಂದಿತ್ತು. ಇದಕ್ಕೂ ಮುನ್ನ ಅಧ್ಯಕ್ಷ ಲೀ ಜೇ ಮ್ಯುಂಗ್ ಅವರಿಗೆ ರಾಷ್ಟ್ರಪತಿ ಭವನದ ಆವರಣದಲ್ಲಿ ಸಾಂಪ್ರದಾಯಿಕ ಸ್ವಾಗತ ಕೋರಲಾಯಿತು. ಈ ವೇಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಮತ್ತು ಪ್ರಧಾನಿ ನರೇಂದ್ರ ಮೋದಿ ಉಪಸ್ಥಿತರಿದ್ದರು. ಬಳಿಕ, ದಕ್ಷಿಣ ಕೊರಿಯಾ ಅಧ್ಯಕ್ಷರು, ನವದೆಹಲಿಯ ರಾಜ್‌ಘಾಟ್‌ನಲ್ಲಿ ಮಹಾತ್ಮಾಗಾಂಧೀಜಿಯವರಿಗೆ ಗೌರವ ನಮನ

ಸಲ್ಲಿಸಿದರು. ಭಾರತಕ್ಕೆ ಮೂರು ದಿನಗಳ ಅಧಿಕೃತ ಭೇಟಿಗಾಗಿ ನಿನ್ನೆ ನವದೆಹಲಿಗೆ ಆಗಮಿಸಿದ ಅಧ್ಯಕ್ಷ ಲೀ ಜೇ ಮ್ಯುಂಗ್ ಅವರನ್ನು ಕೇಂದ್ರ ಸಚಿವ ಹರ್ಷ್ ಮಲ್ಹೋತ್ರಾ ಅವರು ಬರಮಾಡಿಕೊಂಡರು. ಅಧ್ಯಕ್ಷರೊಂದಿಗೆ ದಕ್ಷಿಣ ಕೊರಿಯಾದ ಪ್ರಥಮ ಮಹಿಳೆ ಕಿಮ್ ಹೇ ಕ್ಯುಂಗ್, ಸಚಿವರು, ಹಿರಿಯ ಅಧಿಕಾರಿಗಳು ಹಾಗೂ ಉದ್ಯಮಿಗಳನ್ನೊಳ¸Àಗೊಂಡ ಉನ್ನತ ಮಟ್ಟದ ನಿಯೋಗವು ಆಗಮಿಸಿದೆ. ಇದು ಅಧ್ಯಕ್ಷ ಲೀ ಜೇ ಮ್ಯುಂಗ್ ಅವರ ಮೊದಲ ಭಾರತ ಪ್ರವಾಸವಾಗಿದ್ದು, ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನೂ ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ.

<>><><*><><<>

ಶ್ರೀಲಂಕಾ ಪ್ರವಾಸದಲ್ಲಿರುವ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ತಮ್ಮ ಅಧಿಕೃತ ಭೇಟಿಯ ಎರಡನೇ ದಿನವಾದ ಇಂದು ನುವಾರಾ ಎಲಿಯಾದ ರಾಗಾಲದಲ್ಲಿರುವ ಲಿಡಲ್ಸ್‌ಡೇಲ್ ಎಸ್ಟೇಟ್‌ಗೆ ಭೇಟಿ ನೀಡಿದರು. ಅಲ್ಲಿ ಅವರು, ಭಾರತ ಸರ್ಕಾರದ ಆರ್ಥಿಕ ನೆರವಿನೊಂದಿಗೆ ಭಾರತೀಯ ವಸತಿ ಯೋಜನೆ ಹಂತ ಮೂರರಡಿ ನಿರ್ಮಿಸಲಾದ ಮನೆಗಳನ್ನು ವೀಕ್ಷಿಸಿ ಫಲಾನುಭವಿಗಳೊಂದಿಗೆ ನೇರ ಸಂವಾದ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಶ್ರೀಲಂಕಾದ ತಮಿಳು ಸಮುದಾಯದ ಕಲ್ಯಾಣಕ್ಕೆ ಭಾರತ ಸರ್ಕಾರ ಬದ್ಧವಾಗಿದೆ. ಶ್ರೀಲಂಕಾದ ಉತ್ತರ ಮತ್ತು ಪೂರ್ವ ಪ್ರಾಂತ್ಯಗಳ ತಮಿಳು ಕುಟುಂಬಗಳಿಗೆ ಹಾಗೂ ತೋಟಗಾರಿಕಾ ಪ್ರದೇಶಗಳಲ್ಲಿನ ಭಾರತೀಯ ಮೂಲದ ತಮಿಳು ಕುಟುಂಬಗಳಿಗಾಗಿ ಭಾರತ ಈವರೆಗೆ ಒಟ್ಟು ೫೦ ಸಾವಿರ ಮನೆಗಳನ್ನು ನಿರ್ಮಿಸಿ ಕೊಟ್ಟಿದೆ. ಅದರ ಮುಂದುವರಿದ ಭಾಗವಾಗಿ ವಸತಿ ಯೋಜನೆಯ ೪ನೇ ಹಂತದಡಿ ಹೆಚ್ಚುವರಿ ೧೦ ಸಾವಿರ ಮನೆಗಳನ್ನು ಶೀಘ್ರದಲ್ಲೇ ಫಲಾನುಭವಿಗಳಿಗೆ ಹಸ್ತಾಂತರಿಸಲಾಗುವುದು ಎಂದು ಘೋಷಿಸಿದರು. ಭಾರತ ಮತ್ತು ಶ್ರೀಲಂಕಾ ನಡುವಿನ ಅಭಿವೃದ್ಧಿ ಪಾಲುದಾರಿಕೆಯನ್ನು ಬಲಪಡಿಸುವ ಮತ್ತು ಅಲ್ಲಿನ ಸಮುದಾಯಗಳೊಂದಿಗೆ ನೇರ ಸಂಪರ್ಕ ಸಾಧಿಸುವ ನಿಟ್ಟಿನಲ್ಲಿ ಈ ಭೇಟಿಯು ಅತ್ಯಂತ ಮಹತ್ವದ್ದಾಗಿದೆ. ಕೊಲಂಬೊದಲ್ಲಿ ನಡೆದ ಮೊದಲ ದಿನದ ಕಾರ್ಯಕ್ರಮಗಳಲ್ಲಿ, ಉಪರಾಷ್ಟ್ರಪತಿಗಳು ಶ್ರೀಲಂಕಾದ ಅಧ್ಯಕ್ಷ ಅನುರ ಕುಮಾರ ದಿಸ್ಸಾನಾಯಕೆ ಮತ್ತು ಪ್ರಧಾನಮಂತ್ರಿ ಹರಿಣಿ ಅಮರಸೂರಿಯಾ ಅವರೊಂದಿಗೆ ಸುದೀರ್ಘ ಮಾತುಕತೆ ನಡೆಸಿದರು.

<>><><*><><<>

ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರು ಸೌದಿ ಅರೇಬಿಯಾಗೆ ಭೇಟಿ ನೀಡಿದ್ದು, ಅಲ್ಲಿನ ಉನ್ನತ ನಾಯಕರೊಂದಿಗೆ ಮಹತ್ವದ ಮಾತುಕತೆ ನಡೆಸಿದ್ದಾರೆ.  ಭದ್ರತಾ ಸಹಕಾರವನ್ನು ಬಲಪಡಿಸುವುದು, ಇಂಧನ ಸ್ಥಿರತೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಪ್ರಾದೇಶಿಕ ಬೆಳವಣಿಗೆಗಳನ್ನು ಪರಾಮರ್ಶಿಸುವುದು ಭೇಟಿಯ ಮುಖ್ಯ ಉದ್ದೇಶವಾಗಿದೆ. ರಿಯಾದ್‌ನ ಕಿಂಗ್

ಖಾಲಿದ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅಜಿತ್ ದೋವಲ್ ಅವರನ್ನು ಸೌದಿ ಅರೇಬಿಯಾದಲ್ಲಿನ ಭಾರತದ ರಾಯಭಾರಿ ಸುಹೇಲ್ ಅಜಾಜ್ ಖಾನ್ ಮತ್ತು ಸೌದಿ ರಾಜಕೀಯ ವ್ಯವಹಾರಗಳ ಉಪ ಸಚಿವ ಸೌದ್ ಅಲ್ ಸತಿ ಬರಮಾಡಿಕೊಂಡರು. ತಮ್ಮ ಭೇಟಿಯ ಅವಧಿಯಲ್ಲಿ ಅಜಿತ್ ದೋವಲ್ ಸೌದಿ ಅರೇಬಿಯಾದ ಇಂಧನ ಸಚಿವ ರಾಜಕುಮಾರ ಅಬ್ದುಲಜೀಜ್ ಬಿನ್ ಸಲ್ಮಾನ್, ವಿದೇಶಾಂಗ ಸಚಿವ ರಾಜಕುಮಾರ ಫೈಸಲ್ ಬಿನ್ ಫರ್ಹಾನ್ ಮತ್ತು ರಾಷ್ಟ್ರೀಯ ಭದ್ರತಾ ಸಲಹೆಗಾರ ಡಾ. ಮುಸೈದ್ ಬಿನ್ ಮೊಹಮ್ಮದ್ ಅಲ್ ಐಬಾನ್ ಅವರನ್ನು ಭೇಟಿ ಮಾಡಿದರು. ವಿಶೇಷವಾಗಿ ಇಂಧನ ಸಚಿವರೊಂದಿಗಿನ ಸಭೆಯಲ್ಲಿ, ಜಾಗತಿಕ ಇಂಧನ ಪೂರೈಕೆಯಲ್ಲಿ ಸ್ಥಿರತೆಯನ್ನು ಕಾಯ್ದುಕೊಳ್ಳುವ ಮತ್ತು ಪ್ರಾದೇಶಿಕ ಅನಿಶ್ಚಿತತೆಯ ನಡುವೆಯೂ ತೈಲ ಪೂರೈಕೆ ಸುಗಮವಾಗಿರುವಂತೆ ನೋಡಿಕೊಳ್ಳುವ ಕುರಿತು ಚರ್ಚಿಸಲಾಯಿತು. ೨೦೨೬ರ ಇರಾನ್ ಸಂಘರ್ಷದ ನಂತರ ಜಾಗತಿಕ ಪೂರೈಕೆ ಸರಪಳಿಯ ಮೇಲೆ ಉಂಟಾಗಿರುವ ಪರಿಣಾಮಗಳ ಹಿನ್ನೆಲೆಯಲ್ಲಿ ಈ ಭೇಟಿಯು ಅತ್ಯಂತ ಮಹತ್ವದ್ದಾಗಿದೆ.

<>><><*><><<>

ಭಾರತ ಮತ್ತು ಅಮೆರಿಕ ನಡುವಿನ ಪ್ರಸ್ತಾವಿತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮೊದಲ ಹಂತದ ಮಾತುಕತೆಗಳು ಇಂದು ವಾಷಿಂಗ್ಟನ್ ಡಿಸಿಯಲ್ಲಿ ಪುನರಾರಂಭಗೊಳ್ಳಲಿವೆ. ಇಂದಿನಿಂದ ಇದೇ ೨೨ ರವರೆಗೆ ನಡೆಯಲಿರುವ ಮೂರು ದಿನಗಳ ಸಭೆಯಲ್ಲಿ ವಾಣಿಜ್ಯ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ದರ್ಪಣ್ ಜೈನ್ ಭಾರತೀಯ ನಿಯೋಗದ ನೇತೃತ್ವ ವಹಿಸಲಿದ್ದಾರೆ. ಈ ನಿಯೋಗದಲ್ಲಿ ಕಸ್ಟಮ್ಸ್ ಮತ್ತು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದು, ಬದಲಾಗುತ್ತಿರುವ ಜಾಗತಿಕ ಸುಂಕದ ವಿದ್ಯಮಾನಗಳ ಹಿನ್ನೆಲೆಯಲ್ಲಿ ವ್ಯಾಪಾರ ಚೌಕಟ್ಟನ್ನು ಮರುಹೊಂದಿಸುವ ಕುರಿತು ಚರ್ಚೆಗಳು ನಡೆಯಲಿವೆ. ಕಳೆದ ನಾಲ್ಕು ತಿಂಗಳ ಅವಧಿಯಲ್ಲಿ ಉಭಯ ದೇಶಗಳ ನಡುವೆ ವರ್ಚುವಲ್ ಮೂಲಕ ಮಾತುಕತೆಗಳು ಮುಂದುವರಿದಿದ್ದವು. ಆದರೆ, ಅಮೆರಿಕಾದ ಸುಂಕ ಪದ್ಧತಿಯಲ್ಲಿ ಉಂಟಾಗಿರುವ ಬದಲಾವಣೆಗಳ ನಂತರ ನಡೆಯುತ್ತಿರುವ ಈ ಭೇಟಿಯು ಹೆಚ್ಚಿನ ಪ್ರಾಮುಖ್ಯತೆ ಪಡೆದಿದೆ.

<>><><*><><<>

ಸಾಂಸ್ಕೃತಿಕ ನಾಯಕ ಜಗಜ್ಯೋತಿ ಶ್ರೀಬಸವೇಶ್ವರರ ಜಯಂತ್ಯುತ್ಸವವಾದ ಇಂದು ಅವರಿಗೆ ಗೌರವ ನಮನ ಸಲ್ಲಿಸಲಾಗುತ್ತಿದೆ. ವೈಶಾಖ ಮಾಸದ ಶುದ್ಧ ತದಿಗೆಯಂದು ಕರ್ನಾಟಕ, ಮಹಾರಾಷ್ಟ್ರ ಮತ್ತು ಆಂಧ್ರ ಪ್ರದೇಶದಲ್ಲಿ ವಿಜೃಂಭಣೆಯಿಂದ ಬಸವ ಜಯಂತಿ ಆಚರಿಸಲಾಗುತ್ತದೆ. ಬಸವ ಜಯಂತಿ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ಬಸವಣ್ಣನವರಿಗೆ ಗೌರವ ನಮನ ಸಲ್ಲಿಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಬಸವೇಶ್ವರರ ನ್ಯಾಯಯುತ

ಸಮಾಜದ ದೃಷ್ಟಿಕೋನ ಮತ್ತು ಸಬಲೀಕರಣಕ್ಕಾಗಿ ಅವರ ಅಚಲ ಪ್ರಯತ್ನ ಯಾವಾಗಲೂ ಸ್ಪೂರ್ತಿದಾಯಕವಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬಸವಣ್ಣನವರಿಗೆ ಗೌರವ ನಮನ ಸಲ್ಲಿಸಿದ್ದು, ಸಮಾನತೆ, ಘನತೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಹೋರಾಡಿದ್ದ ಬಸವಣ್ಣನವರು ಸಮಾಜದಲ್ಲಿನ ಅಸಮಾನತೆಯನ್ನು ಖಂಡಿಸಿದ್ದರು ಎಂದು ಸ್ಮರಿಸಿದ್ದಾರೆ.

<>><><*><><<>

ಜಮ್ಮು ಮತ್ತು ಕಾಶ್ಮೀರದ ಉಧಂಪುರ ಜಿಲ್ಲೆಯಲ್ಲಿ ಸಂಭವಿಸಿದ ಭೀಕರ ಬಸ್ ಅಪಘಾತದಲ್ಲಿ ೧೫ ಮಂದಿ ಸಾವನ್ನಪ್ಪಿದ್ದು, ಹಲವಾರು ಪ್ರಯಾಣಿಕರು ಗಾಯಗೊಂಡಿದ್ದಾರೆ. ರಾಮನಗರದಿಂದ ಉಧಂಪುರಕ್ಕೆ ತೆರಳುತ್ತಿದ್ದ ಸಾರಿಗೆ ಬಸ್, ಜಲೋ ಮತ್ತು ಕಾನೋಟ್ ಗ್ರಾಮಗಳ ಸಮೀಪ ಅಪಘಾತಕ್ಕೀಡಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಹಾಗೂ ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಅಪಘಾತಕ್ಕೆ ನಿಖರವಾದ ಕಾರಣ ತಿಳಿಯಲು ತನಿಖೆ ಪ್ರಗತಿಯಲ್ಲಿದೆ. ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗಳಿಗೆ ದಾಖಲಿಸಲಾಗಿದ್ದು, ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಹೇಳಲಾಗಿದೆ.

<>><><*><><<>

ಪಶ್ಚಿಮ ಏಷ್ಯಾದ ಪ್ರಸಕ್ತ ಸಂಘರ್ಷ ಮತ್ತು ತೈಲಬೆಲೆ ಏರಿಕೆಯ ಸವಾಲುಗಳನ್ನು ಎದುರಿಸಲು ಭಾರತದ ಆರ್ಥಿಕತೆ ಸನ್ನದ್ಧವಾಗಿದೆ ಎಂದು ಭಾರತೀಯ ಸ್ಟೇಟ್ ಬ್ಯಾಂಕ್-ಎಸ್‌ಬಿಐ ಸಂಶೋಧನಾ ವರದಿ ತಿಳಿಸಿದೆ. ೨೦೨೬ರ ಆರ್ಥಿಕ ವರ್ಷದಲ್ಲಿ ಶೇಕಡ ೭.೬ರಷ್ಟು ಪ್ರಗತಿ ದಾಖಲಿಸಿರುವ ಭಾರತ ೨೦೨೭ರ ಆರ್ಥಿಕ ವರ್ಷದಲ್ಲಿ ಶೇಕಡ ೬.೮ರಿಂದ ೭.೧ರಷ್ಟು ಜಿಡಿಪಿ ಬೆಳವಣಿಗೆಯನ್ನು ಸಾಧಿಸುವ ನಿರೀಕ್ಷೆಯಿದೆ. ಈ ಅವಧಿಯಲ್ಲಿ ಹಣದುಬ್ಬರ ಶೇಕಡ ೪.೫ರ ಅಸುಪಾಸಿನಲ್ಲಿರಲಿದ್ದು, ವಿತ್ತಿಯ ಕೊರತೆ ಶೇಕಡ ೪.೫ ರಿಂದ ೪.೬ರಷ್ಟಿರಲಿದೆ ಎಂದು ಅಂದಾಜಿಸಲಾಗಿದೆ. ಪಶ್ಚಿಮ ಏಷ್ಯಾ ಉದ್ವಿಗ್ನತೆ ಕೃಷಿ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಹಾಗೂ ಪೂರೈಕೆ ಸರಪಳಿಯ ಮೇಲೆ ಕೆಲವು ಅಡೆತಡೆ ಉಂಟು ಮಾಡಬಹುದಾದರೂ ಭಾರತಕ್ಕೆ ಜಾಗತಿಕ ಮೌಲ್ಯ ಸರಪಳಿ ಮತ್ತು ಹಣಕಾಸು ಸೇವೆಯಲ್ಲಿ ಅವಕಾಶಗಳು ಇರಲಿವೆ ಎಂದು ವರದಿ ತಿಳಿಸಿದೆ.

<>><><*><><<>

ಪಶ್ಚಿಮ ಬಂಗಾಳದ ವಿಧಾನಸಭೆ ಚುನಾವಣೆಗೆ ಚುನಾವಣೆಗೆ ಮುನ್ನ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅಲ್ಲಿನ ಮೇಲ್ಮನವಿ ನ್ಯಾಯಮಂಡಳಿಗಳ ಕಾರ್ಯ ನಿರ್ವಹಣೆ ಬಗ್ಗೆ ಕಳವಳ ವ್ಯಕ್ತಪಡಿಸಿರುವ ಸುಪ್ರೀಂಕೋರ್ಟ್, ಈ

ಕುರಿತು ವರದಿ ಸಲ್ಲಿಸುವಂತೆ ಕೊಲ್ಕತ್ತಾ ಉಚ್ಚನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಿಗೆ ಸೂಚನೆ ನೀಡಿದೆ. ಮುಖ್ಯನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ ಮಲ್ಯ ಬಾಗ್ಚಿ ಅವನ್ನೊಳಗೊಂಡ ಪೀಠದ ಎದುರು ಹಿರಿಯ ವಕೀಲ ದೇವದತ್ ಕಾಮತ್ ಈ ವಿಷಯ ಪ್ರಸ್ತಾಪಿಸಿದರು. ಮತದಾರರ ಪಟ್ಟಿಯ ವಿವಾದಗಳನ್ನು ಆಲಿಸಲು ಸ್ಥಾಪಿಸಲಾದ ನ್ಯಾಯಮಂಡಳಿಗಳು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲ ಮತ್ತು ಸರ್ವೋಚ್ಚನ್ಯಾಯಾಲಯದ ಆದೇಶಗಳನ್ನು ಪಾಲಿಸುತ್ತಿಲ್ಲ ಎಂದು ವಕೀಲರು ದೂರಿದರು.

<>><><*><><<>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಪ್ರಾರಂಭವಾಗಲಿದೆ. ನವಚಂಡಿಗಡದ ಮುಲ್ಲಾನ್‌ಪುರ್‌ದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಪಂಜಾಬ್ ಕಿಂಗ್ಸ್ ೫೪ ರನ್‌ಗಳ ಬೃಹತ್ ಗೆಲುವು ದಾಖಲಿಸಿತು. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ ಕಿಂಗ್ಸ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೫೪ ರನ್ ಗಳಿಸಿತು. ೨೫೫ ರನ್‌ಗಳ ಬೃಹತ್ ಗುರಿ ಬೆನ್ನತ್ತಿದ ಲಖನೌ ತಂಡ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೦೦ ರನ್‌ಗಳಿಸಲಷ್ಟೇ ಶಕ್ತವಾಯಿತು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>